## ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನಲ್ಲಿ

## ಸ್ವಾಮಿ ವಿವೇಕಾನಂದರ ಜಯಂತಿ ಪ್ರಯುಕ್ತ ಹಮ್ಮಿಕೊಂಡಿದ್ದ

## 'ರಾಷ್ಟ್ರೀಯ ಯುವ ಸಪ್ತಾಹ'ದಲ್ಲಿ

## ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮ




ಮೈಸೂರು: ಸತ್ಯ ಮತ್ತು ಪ್ರಾಮಾಣಿಕ ನಡತೆಯಿಂದ ಮನುಷ್ಯ ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಸಾಧ್ಯ ಎಂದು ನಗರದ ಅರವಿಂದ ನರ್ಸಿಂಗ್‌ಹೋಂನ ವೈದ್ಯಾಧಿಕಾರಿ ಡಾ.ಪ್ರಸನ್ನಕುಮಾರ್ ತಿಳಿಸಿದರು.

ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನಲ್ಲಿ ಸ್ವಾಮಿ ವಿವೇಕಾನಂದರ ಜಯಂತಿ ಪ್ರಯುಕ್ತ ಹಮ್ಮಿಕೊಂಡಿದ್ದ 'ರಾಷ್ಟ್ರೀಯ ಯುವ ಸಪ್ತಾಹ'ದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ವತಿಯಿಂದ ಆಯೋಜಿಸಿದ್ದ ''ಹಳ್ಳಿ, ನಗರಗಳಲ್ಲಿ ಸ್ವಚ್ಛತೆ, ಸ್ವಯಂ ಪ್ರೇರಿತ ಶ್ರಮದಾನ, ನೇತ್ರದಾನ, ರಕ್ತದಾನದ ಬಗ್ಗೆ ಅರಿವು ಹಾಗೂ ನೀರಿನ ಕೊಳ, ರಸ್ತೆ ಸುರಕ್ಷತೆಯಲ್ಲಿ ಯುವಜನತೆಯ ಪಾತ್ರ'' ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮನುಷ್ಯನ ನಡತೆಗೂ ಆರೋಗ್ಯಕ್ಕೂ ನಿಕಟ ಸಂಬಂಧವಿದೆ. ಆದ್ದರಿಂದ ಶಾಂತ ಚಿತ್ತದಿಂದ ಧನಾತ್ಮಕ ಚಿಂತನೆ ಬೆಳೆಸಿಕೊಳ್ಳಬೇಕು. ಪ್ರಾಮಾಣಿಕತೆ ಮತ್ತು ಸತ್ಯ ಮಾರ್ಗಗಳು ಮನುಷ್ಯನ ಆರೋಗ್ಯವನ್ನು ಉತ್ತಮಗೊಳಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ಪಟ್ಟಣ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಶುಚಿತ್ವದ ಬಗ್ಗೆ ಅರಿವು ಅಗತ್ಯ. ಸುತ್ತಮುತ್ತಲ ಪ್ರದೇಶವನ್ನು ಶುಚಿಯಾಗಿಟ್ಟುಕೊಳ್ಳುವ ಮೂಲಕ ಆರೋಗ್ಯಕರ ಪರಿಸರ ನಿರ್ಮಿಸಿದಾಗ ಆರೋಗ್ಯಕರ ಸಮಾಜ ನಿರ್ಮಾಣವಾಗಲಿದೆ. ಯುವಜನರು ಸ್ವಯಂ ಪ್ರೇರಿತ ಶ್ರಮದಾನ ಮಾಡುವ ಮೂಲಕ ಸಮಾಜ ಸೇವೆಯಲ್ಲಿ ತೊಡಗಿಕೊಳ್ಳಬೇಕು. ಆಗ ಮಾತ್ರ ಸಮಾಜದ ಸುಧಾರಣೆ ಸಾಧ್ಯ ಎಂದು ಹೇಳಿದರು.

ನೇತ್ರದಾನ ಮಹಾದಾನ. ಹೆಸರು ನೋಂದಾಯಿಸಿಕೊಂಡವರಿಂದ ನಿಧನದ ಬಳಿಕ ವೈದ್ಯರು ಕಣ್ಣನ್ನು ಪಡೆದು ಅಗತ್ಯವಿರುವವರಿಗೆ ನೀಡುತ್ತಾರೆ. ಈ ಮೂಲಕ ಅಂಧರಿಗೆ ಪ್ರಪಂಚವನ್ನು ನೋಡುವ ಭಾಗ್ಯ ಕಲ್ಪಿಸಬಹುದಾಗಿದೆ. ಇದೇ ರೀತಿ ಪ್ರತಿಯೊಬ್ಬ ಆರೋಗ್ಯವಂತ ವ್ಯಕ್ತಿ ರಕ್ತದಾನ ಮಾಡಬಹುದು. ರಕ್ತದಾನದಿಂದ ಮೊತ್ತೊಂದು ಜೀವವನ್ನು ಉಳಿಸಬಹುದು. ಯುವ ಜನತೆ ರಕ್ತದಾನ ಮತ್ತು ನೇತ್ರದಾನದ ಬಗ್ಗೆ ಜನರಲ್ಲಿ ಅರಿವು ಮೂಡಿಸಬೇಕು ಎಂದು ಸಲಹೆ ನೀಡಿದರು.

ಪ್ರಾಂಶುಪಾಲ ಡಾ.ಅಣ್ಣೇಗೌಡ ಅಧ್ಯಕ್ಷತೆವಹಿಸಿ ಮಾತನಾಡಿ, ಶುಚಿತ್ವ, ಆರೋಗ್ಯ ಮತ್ತು ರಕ್ತದಾನ, ನೇತ್ರದಾನದ ಮಹತ್ವವನ್ನು ಎಲ್ಲರಿಗೂ ತಿಳಿಸಬೇಕಿದೆ. ಆರೋಗ್ಯಕರ ಬದುಕಿನಿಂದ ಆರೋಗ್ಯಕರ ಸಮಾಜ ನಿರ್ಮಿಸಬಹುದು. ಈ ರೀತಿಯ ಉಪನ್ಯಾಸ ಕಾರ್ಯಕ್ರಮ ಅರ್ಥಪೂರ್ಣವಾಗಿದ್ದು, ಇದರ ಪ್ರಯೋಜನ ಎಲ್ಲರಿಗೂ ದಕ್ಕಬೇಕು ಎಂದು ಹೇಳಿದರು.

ಸಮಾರಂಭದಲ್ಲಿ ಸಾಂಸ್ಕೃತಿಕ ವೇದಿಕೆ ಕಾರ್ಯದರ್ಶಿ ಪಿ.ಶಿವಣ್ಣ, ವಾರ್ಷಿಕ ಸಂಚಿಕೆ ಸಂಪಾದಕ ಪ್ರೊ.ಕೃಷ್ಣಮೂರ್ತಿ, ದೈಹಿಕ ಶಿಕ್ಷಣ ನಿರ್ದೇಶಕ ಎಂ.ಎಸ್.ನಾಗಣ್ಣ, ಎನ್‌ಸಿಸಿ ಅಧಿಕಾರಿ ಎಂ.ಸಿ.ಶಿವಕುಮಾರ್, ರಾಷ್ಟ್ರೀಯ ಸೇವಾ ಯೋಜನೆ ಅಧಿಕಾರಿಗಳಾದ ಡಾ.ಗೋವಿಂದೇಗೌಡ ಕೆ.ಇ, ಪ್ರೊ.ರೇಖಾಮ್ಯಾಥ್ಯೂ ಹಾಜರಿದ್ದರು. ಇದೇ ಸಂದರ್ಭದಲ್ಲಿ ರಕ್ತದಾನ ಮತ್ತು ನೇತ್ರದಾನದ ಮಹತ್ವ ಹಾಗೂ ಪರಿಸರ ಸಂರಕ್ಷಣೆ ಕುರಿತಾದ ಭಿತ್ತಿಚಿತ್ರಗಳ ಪ್ರದರ್ಶನ ಹಾಗೂ ಕರಕುಶಲ ವಸ್ತುಗಳ ಪ್ರದರ್ಶನ ಆಯೋಜಿಸಲಾಗಿತ್ತು.